**All India Radio: Bangalore**
**National Bulletin In Kannada**
**12.03.2026 07.35 a.m.**

ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

**12.03.2026 07.35 a.m.**

**<><><><>**

ಮುಖ್ಯಾಂಶಗಳು

1. ಗ್ರಾಮೀಣಾಭಿವೃದ್ಧಿ, ಹಣಕಾಸು ಹಂಚಿಕೆ ಸೇರಿ ವಿವಿಧ ವಿಷಯಗಳ ಕುರಿತು ಇಂದು ಸಂಸತ್‌ನಲ್ಲಿ ಚರ್ಚೆ
2. ನವದೆಹಲಿಯಲ್ಲಿಂದು ಕೃಷಿ-ಆಹಾರ ವ್ಯವಸ್ಥೆಯಲ್ಲಿ ಮಹಿಳೆಯರ ಪಾತ್ರ ಕುರಿತ ಜಾಗತಿಕ ಸಮ್ಮೇಳನಕ್ಕೆ ರಾಷ್ಟ್ರಪತಿ ದ್ರೌಪದಿ ಮುರ್ಮು ಚಾಲನೆ
3. ದೇಶದ ಎಲ್‌ಪಿಜಿ ಉತ್ಪಾದನೆ ಶೇಕಡಾ ೨೫ ರಷ್ಟು ಹೆಚ್ಚಳ - ಕೇಂದ್ರ ಸರ್ಕಾರ
4. ಎಫ್‌ಐಎಚ್ ಹಾಕಿ ಮಹಿಳಾ ವಿಶ್ವಕಪ್: ವೇಲ್ಸ್ ವಿರುದ್ಧ ಭಾರತ ತಂಡಕ್ಕೆ ಭರ್ಜರಿ ಜಯ

<><><><>

ಗ್ರಾಮೀಣಾಭಿವೃದ್ಧಿ ಸಚಿವಾಲಯದ ಕಾರ್ಯವೈಖರಿಯ ಕುರಿತು ರಾಜ್ಯಸಭೆ ಇಂದು ಹೆಚ್ಚಿನ ಚರ್ಚೆ ನಡೆಸಲಿದೆ. ಲೋಕಸಭೆಯಲ್ಲಿ, ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರು ೨೦೨೫-೨೬ರ ಹಣಕಾಸು ವರ್ಷದ ಸೇವೆಗಳಿಗಾಗಿ ಭಾರತದ ಏಕೀಕೃತ ನಿಧಿಯಿಂದ ಕೆಲವು ಹೆಚ್ಚುವರಿ ಮೊತ್ತಗಳನ್ನು ಪಾವತಿಸಲು ಮತ್ತು ಹಂಚಿಕೆ ಮಾಡಲು ಅಧಿಕಾರ ನೀಡುವ ವಿನಿಯೋಗ ಮಸೂದೆ ೨೦೨೬ ಅನ್ನು ಮಂಡಿಸಲಿದ್ದಾರೆ. ಸ್ಪೀಕರ್ ಓಂ ಬಿರ್ಲಾ ಅವರನ್ನು ಪದಚ್ಯುತಗೊಳಿಸುವಂತೆ ಕೋರಿ ನಿನ್ನೆ ವಿರೋಧ ಪಕ್ಷದವರು ಮಂಡಿಸಿದ ನಿರ್ಣಯವನ್ನು ಲೋಕಸಭೆಯು ಧ್ವನಿ ಮತದ ಮೂಲಕ ನಿರಾಕರಿಸಿತು. ಸದನದಲ್ಲಿ ನಡೆದ ಚರ್ಚೆಗೆ ಉತ್ತರಿಸಿದ ಕೇಂದ್ರ ಗೃಹ ಸಚಿವ ಅಮಿತ್ ಶಾ, ಲೋಕಸಭಾಧ್ಯಕ್ಷರ ಸಮಗ್ರತೆಯನ್ನು ವಿರೋಧ ಪಕ್ಷಗಳು ಪ್ರಶ್ನಿಸಿರುವುದು ದುರದೃಷ್ಟಕರ ಎಂದು ಹೇಳಿದರು. ಸುಮಾರು ನಾಲ್ಕು ದಶಕಗಳ ನಂತರ, ಲೋಕಸಭಾಧ್ಯಕ್ಷರ ವಿರುದ್ಧ ಅವಿಶ್ವಾಸ ನಿರ್ಣಯ ಮಂಡಿಸಲಾಗಿದೆ. ಇದು ಸಂಸದೀಯ ವ್ಯವಸ್ಥೆ ಮತ್ತು ಸದನ ಎರಡಕ್ಕೂ ವಿಷಾದನೀಯ ಘಟನೆಯಾಗಿದೆ. ಲೋಕಸಭಾಧ್ಯಕ್ಷರು ಯಾವುದೇ ರಾಜಕೀಯ ಪಕ್ಷಕ್ಕೆ ಸೀಮಿತವಾಗಿರದೆ ಇಡೀ ಸದನಕ್ಕೆ ಸೇರಿದವರಾಗಿರುತ್ತಾರೆ ಎಂದು ಅವರು

ಪ್ರತಿಪಾದಿಸಿದರು. ಬಿಜೆಪಿ ಮತ್ತು ಎನ್‌ಡಿಎ ಲೋಕಸಭಾಧ್ಯಕ್ಷರ ವಿರುದ್ಧ ಎಂದೂ ಅವಿಶ್ವಾಸ ಸೂಚನೆ ತಂದಿಲ್ಲ. ಲೋಕಸಭಾಧ್ಯಕ್ಷರ ಸಮಗ್ರತೆ ಪ್ರಶ್ನಾತೀತ ಎನ್ನುವುದು ತಮ್ಮ ನಂಬಿಕೆಯಾಗಿದೆ ಎಂದು ಸಚಿವ ಅಮಿತ್ ಶಾ ಹೇಳಿದರು. ಇದಕ್ಕೂ ಮುನ್ನ ಚರ್ಚೆಯಲ್ಲಿ ಪಾಲ್ಗೊಂಡ ರವಿಶಂಕರ್ ಪ್ರಸಾದ್, ಪ್ರತಿಪಕ್ಷಗಳ ಕೆಲವು ನಾಯಕರ ಹಿತಾಸಕ್ತಿಗಾಗಿ ಈ ನಿರ್ಣಯವನ್ನು ಮಂಡಿಸಲಾಗಿದೆ ಎಂದು ದೂರಿದರು. ಪ್ರತಿಪಕ್ಷದ ನಾಯಕ ರಾಹುಲ್ ಗಾಂಧಿ ಮಾತನಾಡಿ, ತಮ್ಮನ್ನು ಅನೇಕ ಬಾರಿ ಸದನದಲ್ಲಿ ಮಾತನಾಡದಂತೆ ತಡೆಯಲಾಗಿದೆ ಎಂದು ಆಪಾದಿಸಿದರು. ಸದನ ಒಂದು ಪಕ್ಷಕ್ಕೆ ಸೇರಿದ್ದಲ್ಲ, ಇಡೀ ದೇಶಕ್ಕೆ ಸೇರಿದ್ದು ಎಂದರು. ಕಾಂಗ್ರೆಸ್‌ನ ಕೆ.ಸಿ.ವೇಣುಗೋಪಾಲ್, ಸಮಾಜವಾದಿ ಪಕ್ಷದ ಆನಂದ್ ಬದೂರಿಯಾ, ಬಿಜೆಪಿಯ ಅನುರಾಗ್ ಸಿಂಗ್ ಠಾಕೂರ್, ಜೆಡಿಎಸ್‌ನ ಮಲ್ಲೇಶ್ ಬಾಬು ಚರ್ಚೆಯಲ್ಲಿ ಪಾಲ್ಗೊಂಡಿದ್ದರು.

<><><><>

ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಇಂದು ನವದೆಹಲಿಯಲ್ಲಿ ಕೃಷಿ-ಆಹಾರ ವ್ಯವಸ್ಥೆಯಲ್ಲಿ ಮಹಿಳೆಯರ ಪಾತ್ರ ಕುರಿತ ಜಾಗತಿಕ ಸಮ್ಮೇಳನ ೨೦೨೬ ಅನ್ನು ಉದ್ಘಾಟಿಸಲಿದ್ದಾರೆ. ಮೂರು ದಿನಗಳ ಈ ಸಮ್ಮೇಳನ ರಾಷ್ಟ್ರ ರಾಜಧಾನಿಯಲ್ಲಿರುವ ಭಾರತೀಯ ಕೃಷಿ ಸಂಶೋಧನಾ ಮಂಡಳಿಯ ಸಮಾವೇಶ ಕೇಂದ್ರದಲ್ಲಿ ನಡೆಯಲಿದೆ. ಕಾರ್ಯಕ್ರಮದಲ್ಲಿ ಕೇಂದ್ರ ಕೃಷಿ ಮತ್ತು ರೈತರ ಕಲ್ಯಾಣ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಭಾಗವಹಿಸಲಿದ್ದಾರೆ. ಈ ಕುರಿತು ಮಾಧ್ಯಮಗಳಿಗೆ ಮಾಹಿತಿ ನೀಡಿದ ಐಸಿಎಆರ್ ಮಹಾನಿರ್ದೇಶಕ ಡಾ. ಎಂ.ಎಲ್.ಜಾಟ್, ೨೦೨೬ರಲ್ಲಿ ವಿಶ್ವಸಂಸ್ಥೆ ಘೋಷಿಸಿದ ಅಂತಾರಾಷ್ಟ್ರೀಯ ಮಹಿಳಾ ರೈತರ ವರ್ಷದ ಸಂದರ್ಭದಲ್ಲಿ ಈ ಕಾರ್ಯಕ್ರಮ ನಡೆಯುತ್ತಿದೆ. ಈ ಸಮ್ಮೇಳನವು ಲಿಂಗ-ಸಮಾನ ನೀತಿ ನಿರೂಪಣೆ, ತಾಂತ್ರಿಕ ನಾವೀನ್ಯತೆ ಮತ್ತು ಅಂತರ್ಗತ ಕೃಷಿ ಅಭಿವೃದ್ಧಿಯನ್ನು ಉತ್ತೇಜಿಸಲು ಸಹಾಯ ಮಾಡುತ್ತದೆ ಎಂದು ತಿಳಿಸಿದ್ದಾರೆ. ಈ ಸಮ್ಮೇಳನದಲ್ಲಿ ವಿಜ್ಞಾನಿಗಳು, ನೀತಿ ನಿರೂಪಕರು, ಕೈಗಾರಿಕಾ ಉದ್ಯಮಿಗಳು, ವೃತ್ತಿಪರರು, ರೈತ ಮಹಿಳೆಯರು, ನವೋದ್ಯಮಗಳು ಮತ್ತು ವಿದ್ಯಾರ್ಥಿಗಳು ಸೇರಿದಂತೆ ೭೦೦ ಕ್ಕೂ ಹೆಚ್ಚು ಪ್ರತಿನಿಧಿಗಳು ಭಾಗವಹಿಸುವ ನಿರೀಕ್ಷೆಯಿದೆ ಎಂದು ಅವರು ಮಾಹಿತಿ ನೀಡಿದರು.

<><><><>

ಗ್ರಾಹಕರಿಗೆ ದೇಶೀಯ ಪೂರೈಕೆಯನ್ನು ಹೆಚ್ಚಿಸುವ ಗುರಿಯನ್ನು ಹೊಂದಿರುವ ಹಲವಾರು ಸರ್ಕಾರಿ ಕ್ರಮಗಳ ನಂತರ ಭಾರತದ ಎಲ್‌ಪಿಜಿ ಉತ್ಪಾದನೆಯು ಶೇಕಡಾ ೨೫ ರಷ್ಟು ಹೆಚ್ಚಾಗಿದೆ ಎಂದು ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವಾಲಯದ ಜಂಟಿ ಕಾರ್ಯದರ್ಶಿ ಸುಜಾತಾ ಶರ್ಮಾ ತಿಳಿಸಿದ್ದಾರೆ. ನವದೆಹಲಿಯಲ್ಲಿ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು, ೨೦೨೬ರ ಮಾರ್ಚ್ ೮ ರಂದು ಕೇಂದ್ರ ಸರ್ಕಾರ, ಪ್ರೊಪೇನ್, ಬ್ಯುಟೇನ್, ಪ್ರೊಪೈಲೀನ್ ಮತ್ತು ಬ್ಯುಟೀನ್‌ಗಳ ಹರಿವನ್ನು ಎಲ್‌ಪಿಜಿ ಕಡೆಗೆ ತಿರುಗಿಸುವ ಮೂಲಕ ಎಲ್‌ಪಿಜಿ ಉತ್ಪಾದನೆಯನ್ನು ಗರಿಷ್ಠಗೊಳಿಸಲು ಸಂಸ್ಕರಣಾಗಾರಗಳು ಮತ್ತು ಪೆಟ್ರೋಕೆಮಿಕಲ್ ಕಂಪನಿಗಳಿಗೆ ನಿರ್ದೇಶನ ನೀಡುವ ಆದೇಶ ಹೊರಡಿಸಿತು. ಈ ಕ್ರಮಗಳ ಪರಿಣಾಮವಾಗಿ, ದೇಶೀಯ ಎಲ್‌ಪಿಜಿ ಉತ್ಪಾದನೆಯು ಶೇಖಡ ೨೫ರಷ್ಟು ಹೆಚ್ಚಾಗಿದೆ ಎಂದು ಹೇಳಿದರು. ಭಾರತದ ಕಚ್ಚಾ ತೈಲ ಪೂರೈಕೆಗಳು ಸುರಕ್ಷಿತವಾಗಿವೆ ಮತ್ತು ಸುಮಾರು ಶೇಖಡ ೭೦ರಷ್ಟು ಕಚ್ಚಾ ತೈಲ ಆಮದುಗಳು ಈಗ ಹಾರ್ಮುಜ್ ಜಲಸಂಧಿಯ ಹೊರಗಿನಿಂದ ಬರುತ್ತಿವೆ ಎಂದು ತಿಳಿಸಿದರು.

<><><><>

ಎಲ್‌ಪಿಜಿ ಆಮದುಗಳ ಸುಗಮ ಮತ್ತು ಮುಕ್ತ ಸಾಗಣೆಯನ್ನು ಖಚಿತಪಡಿಸಿಕೊಳ್ಳಲು ಕೇಂದ್ರ ಸರ್ಕಾರ ಸಾಧ್ಯವಿರುವ ಎಲ್ಲ ಪ್ರಯತ್ನಗಳನ್ನು ಮಾಡುತ್ತಿದೆ ಎಂದು ಭಾರತ್ ಪೆಟ್ರೋಲಿಯಂ ಕಾರ್ಪೊರೇಷನ್ ಲಿಮಿಟೆಡ್, ನಾಗರಿಕರಿಗೆ ಭರವಸೆ ನೀಡಿದೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಬಿಪಿಸಿಎಲ್, ಎಲ್‌ಪಿಜಿ ಆಮದಿನ ಮೇಲೆ ಪರಿಣಾಮ ಬೀರುವ ಪ್ರಸ್ತುತ ಭೌಗೋಳಿಕ ರಾಜಕೀಯ ಪರಿಸ್ಥಿತಿ ಮತ್ತು ನಿರ್ಬಂಧದಿಂದಾಗಿ, ವಿತರಣೆಯನ್ನು ಖಚಿತಪಡಿಸಿಕೊಳ್ಳಲು ಲಭ್ಯವಿರುವ ಎಲ್‌ಪಿಜಿ ಸಿಲಿಂಡರ್‌ಗಳನ್ನು ಎಚ್ಚರಿಕೆಯಿಂದ ವಿತರಿಸಲಾಗುತ್ತಿದೆ ಎಂದು ಹೇಳಿದೆ. ಎಲ್‌ಪಿಜಿ ಸಿಲಿಂಡರ್‌ಗಳ ಹಂಚಿಕೆಯಲ್ಲಿ ಮನೆಗಳಿಗೆ ಹೆಚ್ಚಿನ ಆದ್ಯತೆ ನೀಡಲಾಗಿದೆ. ಪ್ರಸ್ತುತ ಎಲ್‌ಪಿಜಿ ಪೂರೈಕೆಗಾಗಿ ಇತರ ಕೋರಿಕೆಗಳನ್ನು ಭಾರತ್ ಪೆಟ್ರೋಲಿಯಂ ಕಾರ್ಪೊರೇಷನ್ ಲಿಮಿಟೆಡ್, ಇಂಡಿಯನ್ ಆಯಿಲ್ ಕಾರ್ಪೊರೇಷನ್ ಮತ್ತು ಹಿಂದೂಸ್ತಾನ್ ಪೆಟ್ರೋಲಿಯಂ ಕಾರ್ಪೊರೇಷನ್ ಲಿಮಿಟೆಡ್‌ನ ಕಾರ್ಯನಿರ್ವಾಹಕ ನಿರ್ದೇಶಕರನ್ನು ಒಳಗೊಂಡ ಜಂಟಿ ಸಮಿತಿಯು ಪರಿಶೀಲಿಸುತ್ತಿದೆ ಎಂದು ಬಿಪಿಸಿಎಲ್ ತಿಳಿಸಿದೆ.

<><><><>

ವಿದೇಶಾಂಗ ವ್ಯವಹಾರಗಳ ಸಚಿವ ಎಸ್.ಜೈಶಂಕರ್ ದೂರವಾಣಿ ಕರೆ ಮೂಲಕ ಫ್ರಾನ್ಸ್ ವಿದೇಶಾಂಗ ಸಚಿವ ಜೀನ್-ನೊಯೆಲ್ ಬ್ಯಾರೋ ಅವರೊಂದಿಗೆ ಪಶ್ಚಿಮ ಏಷ್ಯಾ ಬಿಕ್ಕಟ್ಟಿನ ಕುರಿತು ಮಾತುಕತೆ ನಡೆಸಿದರು. ಈ ಬಗ್ಗೆ ಸಾಮಾಜಿಕ ಜಾಲತಾಣದಲ್ಲಿ ಸಚಿವರು, ಪಶ್ಚಿಮ ಏಷ್ಯಾ ಸಂಘರ್ಷದ ಕುರಿತು ಫ್ರಾನ್ಸ್ ವಿದೇಶಾಂಗ ಸಚಿವ ಜೀನ್-ನೊಯೆಲ್ ಬ್ಯಾರೋ ಅವರೊಂದಿಗೆ ಚರ್ಚಿಸಲಾಯಿತು ಮತ್ತು ಈ ಚರ್ಚೆಯನ್ನು ಖುದ್ದಾಗಿ ಮುಂದುವರಿಸಲು ಎದುರು ನೋಡುತ್ತಿದ್ದೇನೆ ಎಂದು ತಿಳಿಸಿದ್ದಾರೆ. ಪಶ್ಚಿಮ ಏಷ್ಯಾ ಪ್ರದೇಶದಲ್ಲಿನ ಬೆಳವಣಿಗೆಗಳು ಹಾಗೂ ವಿಮಾನ ಪ್ರಯಾಣದ ಮೇಲೆ ಉಂಟಾಗಬಹುದಾದ ಪರಿಣಾಮಗಳ ಬಗ್ಗೆ ನಾಗರಿಕ ವಿಮಾನಯಾನ ಸಚಿವಾಲಯ ತೀವ್ರ ನಿಗಾ ಇರಿಸಿದೆ. ನಾಗರಿಕ ವಿಮಾನಯಾನ ಸಚಿವ ಕೆ. ರಾಮ್ ಮೋಹನ್ ನಾಯ್ಡು ಅವರು ಪರಿಸ್ಥಿತಿಯನ್ನು ನಿರಂತರವಾಗಿ ಮೇಲ್ವಿಚಾರಣೆ ಮಾಡುತ್ತಿದ್ದಾರೆ ಎಂದು ಸಚಿವಾಲಯ ತಿಳಿಸಿದೆ. ಮತ್ತೊಂದೆಡೆ, ಲೆಬನಾನ್‌ನಲ್ಲಿ ಜನರು ಸ್ಥಳಾಂತರಗೊಳ್ಳುತ್ತಿರುವುದಕ್ಕೆ ಫ್ರಾನ್ಸ್ ಅಧ್ಯಕ್ಷ ಎಮ್ಯಾನುಯೆಲ್ ಮ್ಯಾಕ್ರನ್ ಕಳವಳ ವ್ಯಕ್ತಪಡಿಸಿದ್ದಾರೆ. ಜೊತೆಗೆ ದಾಳಿಗಳನ್ನು ನಿಲ್ಲಿಸುವಂತೆ ಹಿಜ್ಬುಲ್ಲಾಗೆ ಕರೆ ನೀಡಿದ್ದಾರೆ.

<><><><>

ಪಶ್ಚಿಮ ಏಷ್ಯಾದ ದೇಶಗಳಲ್ಲಿ ವಾಸಿಸುವ ಭಾರತೀಯ ಪ್ರಜೆಗಳ ಸುರಕ್ಷತೆಗೆ ಕೇಂದ್ರ ಸರ್ಕಾರ ಬದ್ಧವಾಗಿದೆ ಎಂದು ವಿದೇಶಾಂಗ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್ ಹೇಳಿದ್ದಾರೆ. ನವದೆಹಲಿಯಲ್ಲಿ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು, ಎಲ್ಲಾ ಭಾರತೀಯ ರಾಯಭಾರ ಕಚೇರಿಗಳು ಅಲ್ಲಿನ ಭಾರತೀಯ ಪ್ರಜೆಗಳೊಂದಿಗೆ ನಿಯಮಿತವಾಗಿ ಸಂಪರ್ಕದಲ್ಲಿವೆ. ಪಶ್ಚಿಮ ಏಷ್ಯಾದಲ್ಲಿ ಗಾಯಗೊಂಡಿರುವ ಕೆಲವು ಭಾರತೀಯರಿಗೆ ಚಿಕಿತ್ಸೆ ನೀಡಲಾಗುತ್ತಿದೆ ಮತ್ತು ಭಾರತೀಯ ರಾಯಭಾರ ಕಚೇರಿ ಅವರೊಂದಿಗೆ ಸಂಪರ್ಕದಲ್ಲಿದೆ ಎಂದು ತಿಳಿಸಿದರು. ದಾಳಿಗೆ ಒಳಗಾದ ವ್ಯಾಪಾರಿ ಹಡಗುಗಳಲ್ಲಿ ಇಬ್ಬರು ಭಾರತೀಯ ಪ್ರಜೆಗಳು ಸಾವನ್ನಪ್ಪಿದ್ದಾರೆ ಮತ್ತು ಒಬ್ಬರು ಕಾಣೆಯಾಗಿದ್ದಾರೆ ಎಂದು ರಣಧೀರ್ ಜೈಸ್ವಾಲ್ ಮಾಹಿತಿ ನೀಡಿದರು.

<><><><>

೨೦೨೬ ರ ಎಫ್‌ಐಎಚ್ ಹಾಕಿ ಮಹಿಳಾ ವಿಶ್ವಕಪ್ ಅರ್ಹತಾ ಪಂದ್ಯದಲ್ಲಿ, ನಿನ್ನೆ ಸಂಜೆ ಹೈದರಾಬಾದ್‌ನಲ್ಲಿ ನಡೆದ ಬಿ ಗುಂಪಿನ ಪಂದ್ಯದಲ್ಲಿ ಭಾರತ ತಂಡ, ವೇಲ್ಸ್ ವಿರುದ್ಧ ೪-೧ ಗೋಲುಗಳಿಂದ ಭರ್ಜರಿ ಜಯ ಸಾಧಿಸಿತು. ನವನೀತ್ ಕೌರ್ ಮೂರು ಗೋಲುಗಳನ್ನು ಗಳಿಸಿದರೆ,

ಸಾಕ್ಷಿ ರಾಣಾ ಒಂದು ಗೋಲು ಗಳಿಸಿದರು. ಈ ಗೆಲುವಿನೊಂದಿಗೆ, ಭಾರತ ತಂಡ, ಸೆಮಿಫೈನಲ್ ಸ್ಥಾನ ಖಚಿತಪಡಿಸಿಕೊಂಡಿತ್ತು. ಭಾರತ ನಾಳೆ ನಡೆಯಲಿರುವ ಸೆಮಿಫೈನಲ್‌ನಲ್ಲಿ ಇಟಲಿ ತಂಡವನ್ನು ಎದುರಿಸಲಿದೆ.

<><><><>

ಸ್ವಿಸ್ ಓಪನ್ ಬ್ಯಾಡ್ಮಿಂಟನ್ ೨೦೧೯ ಪಂದ್ಯಾವಳಿಯಲ್ಲಿ ಭಾರತದ ಕಿರಣ್ ಜಾರ್ಜ್, ಮಾಜಿ ವಿಶ್ವ ಚಾಂಪಿಯನ್ ಸಿಂಗಾಪುರದ ಲೋಹ್ ಕೀನ್ ಯೂ ವಿರುದ್ಧ ನೇರ ಸೆಟ್‌ಗಳಿಂದ ಜಯ ಸಾಧಿಸಿದರು. ಕಿರಣ್ ತಮ್ಮ ಆರಂಭಿಕ ಸುತ್ತಿನ ಪಂದ್ಯದಲ್ಲಿ ಲೋಹ್ ಅವರನ್ನು ೨೩-೨೧, ೨೧-೧೯ ಅಂತರದಿಂದ ಸೋಲಿಸಿ, ಮುನ್ನಡೆ ಸಾಧಿಸಿದರು. ಅವರು ಮುಂದಿನ ಸುತ್ತಿನ ಪಂದ್ಯದಲ್ಲಿ ಹಾಂಗ್‌ಕಾಂಗ್‌ನ ಜೇಸನ್ ಗುಣವಾನ್ ಅವರೊಂದಿಗೆ ಸೆಣಸಲಿದ್ದಾರೆ. ಭಾರತದ ಮಿಶ್ರ ಡಬಲ್ಸ್ ಜೋಡಿ, ಧ್ರುವ್ ಕಪಿಲಾ ಮತ್ತು ತನಿಶಾ ಕ್ರಾಸ್ಟೊ ಕೂಡ ತಮ್ಮ ಆರಂಭಿಕ ಪಂದ್ಯದಲ್ಲಿ ಸೆಡ್ ಜೆಸ್ಪರ್ ಟಾಫ್ಟ್ ಮತ್ತು ಡೆನ್ಮಾರ್ಕ್‌ನ ಅಮಾಲಿ ಮೆಗೆಲುಂಡ್ ವಿರುದ್ಧ ೨೧-೧೫, ೨೧-೧೪ ಅಂತರದಲ್ಲಿ ಭರ್ಜರಿ ಜಯ ಸಾಧಿಸಿದರು. ಈ ಜೋಡಿ ಮುಂದಿನ ಪಂದ್ಯದಲ್ಲಿ ಚೀನಾದ ಗಾವೊ ಜಿಯಾ ಕ್ಸುವಾನ್ ಮತ್ತು ವು ಮೆಂಗ್ ಯಿಂಗ್ ಅವರನ್ನು ಎದುರಿಸಲಿದೆ. ಮಹಿಳೆಯರ ಸಿಂಗಲ್ಸ್ ವಿಭಾಗದಲ್ಲಿ ಥೈಲ್ಯಾಂಡ್‌ನ ಪೋರ್ನ್‌ಪವೀ ಚೋಚುವಾಂಗ್, ಭಾರತದ ಮಾಲ್ವಿಕಾ ಬನ್ಸೋಡ್ ಅವರನ್ನು ೨೧-೧೧ ಮತ್ತು ೨೧-೧೫ ಅಂತರದಿಂದ ಮಣಿಸಿದರು.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>